**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.**

ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ಜೂನ್–23/03/2023–24 ದಿನಾಂಕ:19.05.2023

**ಗೆ,**

ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ)
ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ

ಮಾನ್ಯರೆ

ವಿಷಯ:– ಜೂನ್–2023ರ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಅರ್ಹ ವಿದ್ಯಾರ್ಥಿಗಳನ್ನು ನೋಂದಾಯಿಸಲು ಹಾಗೂ ಮಾರ್ಚ್–2023ರ ಮುಖ್ಯ ಪರೀಕ್ಷೆಯಲ್ಲಿ ಹಾಜರಾದ ವಿದ್ಯಾರ್ಥಿಗಳ ಮೌಲ್ಯಮಾಪನಗೊಂಡ ಉತ್ತರಪತ್ರಿಕೆಗಳ ಮರುಎಣಿಕೆ ಮತ್ತು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ದಿನಾಂಕ ವಿಸ್ತರಣೆ ಕುರಿತು.

ಉಲ್ಲೇಖ:–
1. ಮಂಡಳಿ ಅಧಿಸೂಚನೆ ಸಂಖ್ಯೆ: ಎ8/ಎಸ್‌ಎಸ್‌ಎಲ್‌ಸಿ/ಜೂನ್–23/03/2023–24 ದಿನಾಂಕ: 07.05.2023.
2. ಈ ಕಛೇರಿ ಸುತ್ತೋಲೆ ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ಮು.ಪ.ಫ/02/2023–24 ದಿನಾಂಕ:07.05.2023
3. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:15.05.2023.

* * * * *

ಜೂನ್–2023ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಹಾಜರಾಗುವ ಅರ್ಹ ಪುನರಾವರ್ತಿತ ವಿದ್ಯಾರ್ಥಿಗಳ ನೋಂದಣಿಗೆ ಸಂಬಂಧಿಸಿದಂತೆ ದೂರವಾಣಿಯ ಮುಖಾಂತರ / ಖುದ್ದಾಗಿ ಕೆಲವು ಅಭ್ಯರ್ಥಿಗಳು/ಪೋಷಕರು ಹಾಗೂ ಶಾಲಾ ಮುಖ್ಯೋಪಾಧ್ಯಾಯರು ದಿನಾಂಕವನ್ನು ವಿಸ್ತರಿಸಲು ಮಂಡಳಿಗೆ ಮನವಿ ಮಾಡಿರುತ್ತಾರೆ. ಅದರಂತೆ ದಿನಾಂಕ:18.05.2023ರವರೆಗೆ ನೋಂದಣಿಗೆ ದಿನಾಂಕವನ್ನು ವಿಸ್ತರಿಸಲಾಗಿತ್ತು. ದಿನಾಂಕ:19.05.2023ರಂದು ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್‌ನ್ನು ಬಳಸಿ ನೋಂದಣಿಯಾಗಿರುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

ಮುಂದುವರೆದು, ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್‌ನ್ನು ಬಳಸಿ ಪರೀಕ್ಷಾ ಶುಲ್ಕ ಪಾವತಿಸಲು ಅವಕಾಶ ಕಲ್ಪಿಸಿದ ನಂತರವೂ ಕೆಲವು ವಿದ್ಯಾರ್ಥಿಗಳ ನೋಂದಣಿಗೆ ಅವಕಾಶವನ್ನು ಮಾಡಿಕೊಡುವಂತೆ ದೂರವಾಣಿಯ ಮುಖಾಂತರ / ಖುದ್ದಾಗಿ ಕೆಲವು ಅಭ್ಯರ್ಥಿಗಳು/ಪೋಷಕರು ಹಾಗೂ ಶಾಲಾ ಮುಖ್ಯೋಪಾಧ್ಯಾಯರು ಪುನ: ಕೋರಿರುತ್ತಾರೆ. ಸದರಿ ಮನವಿಗಳನ್ನು ಪರಿಶೀಲಿಸಲಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಜೂನ್–2023ರ ಪೂರಕ ಪರೀಕ್ಷೆಗೆ ವಿದ್ಯಾರ್ಥಿಗಳ ನೋಂದಣಿ ಮತ್ತು ಶುಲ್ಕ ಪಾವತಿಗೆ ಕೆಳಕಂಡಂತೆ ಅಂತಿಮವಾಗಿ ದಿನಾಂಕವನ್ನು ವಿಸ್ತರಿಸಿದೆ. ಜೂನ್–2023ರ ಮಾಹೆಯಲ್ಲಿ ಪೂರಕ ಪರೀಕ್ಷೆಯು ಪ್ರಾರಂಭವಾಗುತ್ತಿದ್ದು ಸಮಯದ ಕೊರತೆಯಿರುವ ಕಾರಣ ಪುನ: ನೋಂದಣಿ ಮತ್ತು ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕ ವಿಸ್ತರಣೆಯನ್ನು ಮಾಡಲಾಗುವುದಿಲ್ಲ.

1. **ಜೂನ್–2023ರ ಪೂರಕ ಪರೀಕ್ಷೆಗೆ ಅರ್ಜಿಯನ್ನು ನೋಂದಾಯಿಸಲು ಮತ್ತು ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿದ ದಿನಾಂಕ**

| ಕ್ರ ಸಂ | ವಿವರ | **ವಿಸ್ತರಣೆ ಮಾಡಿದ ಕೊನೆಯ ದಿನಾಂಕ** |
|---|---|---|
| 1 | ದಿನಾಂಕ:19.05.2023 ರಿಂದ ದಿ:22.05.2023ರವರೆಗೆ ಪ್ರತಿ ಅಭ್ಯರ್ಥಿಗೆ ನಿಗಧಿತ ಪರೀಕ್ಷಾ ಶುಲ್ಕ ಸ್ವೀಕರಿಸಿ NEFT ಚಲನ್ ಮೂಲಕ ಬ್ಯಾಂಕಿಗೆ ಪಾವತಿಸಿ, ಬ್ಯಾಂಕ್‌ನ ಮೂಲ ಚಲನ್ ಪ್ರತಿ ಮತ್ತು ಇತರೆ ದಾಖಲೆಗಳನ್ನು ಮಂಡಳಿಗೆ ತಲುಪಿಸಲು **ಕೊನೆಯ** ದಿನಾಂಕ: | 22.05.2023 |

**ವಿಶೇಷ ಸೂಚನೆ:– ದಿನಾಂಕ:19.05.2023 ರಿಂದ ದಿ:22.05.2023ರವರೆಗೆ ಅನ್‌ಲೈನ್‌ನಲ್ಲಿ ವಿದ್ಯಾರ್ಥಿಗಳ ವಿವರಗಳನ್ನು ಅಪ್‌ಲೋಡ್ ಮಾಡಲು ಮತ್ತು ಆನ್‌ಲೈನ್‌ನಲ್ಲಿ ಬ್ಯಾಂಕ್ ಚಲನ್ ಜನರೇಟ್ ಮಾಡಲು ಸಾಧ್ಯವಿರುವುದಿಲ್ಲ. ಬದಲಿಗೆ ಈ ಪತ್ರದೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಸದರಿ ವಿದ್ಯಾರ್ಥಿಗಳ ಎಸ್‌ಎಟಿಸ್ / ನೋಂದಣಿ ಸಂಖ್ಯೆ, ಆಯ್ಕೆ**

<u>ಮಾಡಿಕೊಂಡ ವಿಷಯ, ಭಾವಚಿತ್ರ ಮತ್ತು ಅಭ್ಯರ್ಥಿಯ ಸಹಿಯನ್ನು ದೃಢೀಕರಿಸಿ, ಪರೀಕ್ಷಾ ಶುಲ್ಕವನ್ನು ಈ ಹಿಂದಿನ ಸಾಲಿನಂತೆ ಮಂಡಳಿಯ **NEFT** ಚಲನ್‌ನಲ್ಲಿ ಭರ್ತಿಮಾಡಿ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಜಮೆ ಮಾಡಿ ಮೂಲ ಪ್ರತಿಯನ್ನು ದಿನಾಂಕ:**22.05.2023**ರೊಳಗೆ ಮಂಡಳಿಯ ಸಂಬಂಧಪಟ್ಟ ಜಿಲ್ಲೆಯ ಶಾಖಾಧಿಕಾರಿಗಳ ವಿಳಾಸಕ್ಕೆ ತಲುಪುವಂತೆ ರವಾನಿಸುವುದು ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರ ಜವಾಬ್ದಾರಿಯಾಗಿರುತ್ತದೆ. ಒಂದು ವೇಳೆ ನಿಗಧಿತ ಅವಧಿಯೊಳಗೆ ಮೇಲಿನಂತೆ ಪ್ರಸ್ತಾವನೆಯನ್ನು ಸಲ್ಲಿಸದೇ, ಅಭ್ಯರ್ಥಿಗೆ ತೊಂದರೆಯುಂಟಾದಲ್ಲಿ ಇದಕ್ಕೆ ಮಂಡಳಿಯು ಜವಾಬ್ದಾರಿಯಾಗುವುದಿಲ್ಲ.</u>

**2. ಮೌಲ್ಯಮಾಪನಗೊಂಡ ಉತ್ತರಪತ್ರಿಕೆಗಳ ಮರುಎಣಿಕೆ ಮತ್ತು ಮರುಮೌಲ್ಯಮಾಪನಕ್ಕೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ವಿಸ್ತರಿಸಿರುವ ದಿನಾಂಕಗಳ ವಿವರ**

| ಕ್ರ ಸಂ | ವಿವರ | ಈಗಾಗಲೇ ನಿಗದಿಪಡಿಸಿದ್ದ ದಿನಾಂಕ | ವಿಸ್ತರಣೆ ಮಾಡಿದ ಕೊನೆಯ ದಿನಾಂಕ |
|---|---|---|---|
| 1 | ಉತ್ತರ ಪತ್ರಿಕೆಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 21.05.2023 | 25.05.2023 |
| 2 | ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 21.05.2023 | 25.05.2023 |
| 3 | ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ನಂತರ Offline ಚಲನ್ ಡೌನ್‌ಲೋಡ್ ಮಾಡಿಕೊಂಡು ಶುಲ್ಕವನ್ನು ಬಿ1/ಕೆ1/ಗ್ರಾಮ1/ಬ್ಯಾಂಕಿಗೆ ಪಾವತಿಸಲು ಅಂತಿಮ ದಿನಾಂಕ: | 22.05.2023 | 26.05.2023 |

ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕದ ಕುರಿತು ತಮ್ಮ ವ್ಯಾಪ್ತಿಯಲ್ಲಿ ಬರುವ ಶಾಲಾ ಮುಖ್ಯೋಪಾಧ್ಯಾಯರ ಮುಖಾಂತರ ವಿದ್ಯಾರ್ಥಿಗಳ/ಪೋಷಕರ ಗಮನಕ್ಕೆ ತಂದು ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ.

ತಮ್ಮ ನಂಬುಗೆಯ,

(ಮಾನ್ಯ ಅಧ್ಯಕ್ಷರ ಆದೇಶಾನುಸಾರ)

19/5/2023

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು (ಪರೀಕ್ಷೆಗಳು)

ಗೆ
1. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಗಳ ಶಾಖಾಧಿಕಾರಿಗಳು/ಅಧೀಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಶಾಖಾಧಿಕಾರಿಗಳು, ಗಣಕಶಾಖೆರವರು ಸದರಿ ಸುತ್ತೋಲೆಯನ್ನು ಮಂಡಳಿ ಜಾಲಾತಾಣ ಮತ್ತು ಶಾಲಾ ಲಾಗಿನ್ ನಲ್ಲಿ ಪ್ರಕಟಿಸುವುದು.

<u>ಪ್ರತಿಯನ್ನು:</u>
1. ಮಾನ್ಯ ಅಧ್ಯಕ್ಷರ ಆಪ್ತ ಶಾಖೆಗೆ ಮಾಹಿತಿಗಾಗಿ
2. ಕಛೇರಿ ಪ್ರತಿ.

A8_letter1

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ
6ನೇ ಅಡ್ಡರಸ್ತೆ ಮಲ್ಲೇಶ್ವರಂ, ಬೆಂಗಳೂರು-560003

****************************************************************************************************

# Application for SSLC MAIN/SUPPLEMENTARY Exam – 202__
# For All Types of Candidate – CCERF/CCEPF/CCERR/CCEPR/NSR/NSPR
# (Fill all the details in Capital Letters)

================================================================================

1. School Name : ..............................................................................................................

2. School DISE Code : .................................................................. 3. KSEAB School Code : ........................

4. Student's SATS Number : ......................................5. Student's Register No : ...................................
(For CCERF only) ( For CCERR/CCEPR/NSR/NSPR only)

6. Student's Name : ..............................................................................................................

7. Father's Name : ..............................................................................................................

8. Mother's Name : ..............................................................................................................

9. Date Of Birth : ................................( In words ............................................................................... )

10. Gender : ............................................................. 11. *Medium* : ..........................................................

12. Religion : ...................................................... 13. Category : ..........................................................

14. Bank Account No : ....................................................... IFSC Code: ...................................................
(FOR SC/ST CANDIDATES ONLY)

15. Bank Name and Branch : ..............................................................................................................
(FOR SC/ST CANDIDATES ONLY)

16. Annual Income : ..................... 17. RD No. Of Caste & Income Certificate:...............................................
(COMPULSORY FOR FEE EXEMPTION ONLY other than SC/ST)

18.Physical Condition : ................................................ 19. Fee Paid : .........................................................

20.Registration Fee for CCEPF Candidates' : .................. 21.Student's / Parent's Mobile No : ..........................

22. Subjects Details :

| Sl. No | Subjects | Subject Code | Subject Name |
|---|---|---|---|
| 1 | First Language | | |
| 2 | Second Language | | |
| 3 | Third Language | | |
| 4 | Core Subject 01 | | |
| 5 | Core Subject 02 | | |
| 6 | Core Subject 03 | | |

23.

Paste the Photo of the student

24.

Signature of the Student

"ಮೇಲ್ಕಂಡ ವಿವರಗಳನ್ನು ಪರಿಶೀಲಿಸಿದ್ದು, ಸರಿಯಾಗಿವೆ ಎಂದು ದೃಢೀಕರಿಸಿ ಅರ್ಜಿಯನ್ನು ರವಾನಿಸುತ್ತಿದ್ದೇನೆ. "

ಸ್ಥಳ : ....................................

ದಿನಾಂಕ : ....................................

...................................................................
ಶಾಲಾ ಮುಖ್ಯಸ್ಥರ ಸಹಿ & ಮೊಹರು

...................................................................
ಮಂಡಳಿಯ ಶಾಖಾಧಿಕಾರಿಗಳ ಸಹಿ